ಡಾ. ಸಂದೀಪ್ ದವೆ, ಭಾ.ಆ.ಸೇ.
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಇಲಾಖೆ

ಕರ್ನಾಟಕ ಸರ್ಕಾರ
Government of Karnataka

Dr. SANDEEP DAVE, I.A.S.
Additional Chief Secretary to Govt
Forest, Ecology and Environment
Department

ಅ.ಸ.ಪ.ಸಂ: ಅಪಜೀ/108/ಎಫ್.ಎ.ಪಿ/2018

ದಿನಾಂಕ 02/08/2018.

ಮಾನ್ಯರೇ,

ವಿಷಯ: 2018-19ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿದಂತೆ "ಹಸಿರು ಕರ್ನಾಟಕ" ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಬಗ್ಗೆ.

*-*-*-*

ಸನ್ಮಾನ್ಯ ಮುಖ್ಯಮಂತ್ರಿಯವರು ಆಯವ್ಯಯ ಭಾಷಣದಲ್ಲಿ ಹಸಿರು ಕರ್ನಾಟಕ ಕಾರ್ಯಕ್ರಮ ವನ್ನು ಘೋಷಿಸಿದ್ದು, ಇತ್ತೀಚಿಗೆ ನಡೆದ ಜಿಲ್ಲಾಧಿಕಾರಿಗಳ ಹಾಗೂ ಮುಖ್ಯ ಕಾರ್ಯನಿರ್ವಹಣಾ ಧಿಕಾರಿಗಳ ಸಭೆಯಲ್ಲಿ ಎಲ್ಲಾ ಜಿಲ್ಲಾಧಿಕಾರಿಗಳಿಗೂ ಹಸಿರು ಕರ್ನಾಟಕ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಸಲುವಾಗಿ ಪ್ರಚಾರ ಕಾರ್ಯಕ್ರಮವನ್ನು 15ನೇ ಆಗಸ್ಟ್ 2018ರಂದು ಪ್ರಾರಂಭಿಸಿ 18ನೇ ಆಗಸ್ಟ್ 2018 ರೊಳಗೆ ಚಾಲನೆಗೊಳಿಸಲು ಸೂಚಿಸಲಾಗಿರುತ್ತದೆ. ಈ ಸಂದರ್ಭದಲ್ಲಿ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡುವುದೇನೆಂದರೆ :-

1. ಆಯಾ ಜಿಲ್ಲಾಧಿಕಾರಿಗಳು ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಹಸಿರು ಕರ್ನಾಟಕ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಬಗ್ಗೆ ಎಲ್ಲಾ ಇಲಾಖೆಗಳ ಅಧಿಕಾರಿಗಳೊಂದಿಗೆ ಆಗಸ್ಟ್ ಮೊದಲನೆ ವಾರದಲ್ಲಿ ಸಭೆ ನಡೆಸಿ ಕಾರ್ಯಕ್ರಮವನ್ನು ರೂಪಿಸುವುದು. ಈ ಕಾರ್ಯಕ್ರಮಕ್ಕೆ ಅಗತ್ಯವಿರುವ ತಾಂತ್ರಿಕ ಸಲಹೆ ಮತ್ತು ಸಸಿಗಳ ಪೂರೈಕೆಯನ್ನು ಆಯಾ ಜಿಲ್ಲೆಯ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಒದಗಿಸಿ ಕೊಡಲು ನಿರ್ದೇಶಿಸಲಾಗಿದೆ.

2. "ಹಸಿರು ಕರ್ನಾಟಕ" ಕಾರ್ಯಕ್ರಮವನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಆಗಸ್ಟ್-15ರಂದು ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಸಸಿ ನೆಡುವ ಮತ್ತು ಸಸಿ ವಿತರಣೆ ಮಾಡುವ ಮೂಲಕ ಚಾಲನೆ ನೀಡುವುದು.

3. ಸದರಿ ಕಾರ್ಯಕ್ರಮವನ್ನು ರಾಜ್ಯಾದ್ಯಂತ ವ್ಯಾಪಕವಾಗಿ ದಿನಾಂಕ 15/08/2018 ರಿಂದ 18/08/2018ರವರೆಗೆ ಹಮ್ಮಿಕೊಳ್ಳಲು ಕ್ರಮ ಕೈಗೊಳ್ಳುವುದು. ವನಮಹೋತ್ಸವ ಕಾರ್ಯಕ್ರಮವನ್ನು ಎಲ್ಲಾ ಇಲಾಖೆಯಲ್ಲಿ ಆಯೋಜಿಸಿ ಸಸಿಗಳನ್ನು ಕಛೇರಿ ಆವರಣ ಅಥವಾ ಸಮೀಪದ ಸರ್ಕಾರಿ ಜಮೀನಿನಲ್ಲಿ ನೆಡುವುದು.

4. ಎಲ್ಲಾ ಇಲಾಖೆಗಳ ಹಾಗೂ ಶಾಲಾ-ಕಾಲೇಜುಗಳ ಸಹಭಾಗಿತ್ವದಿಂದ ದೊಡ್ಡ ಪ್ರಮಾಣದಲ್ಲಿ ಬೀಜದ ಉಂಡೆ ಕಾರ್ಯಕ್ರಮವನ್ನು ಆಯೋಜಿಸಿ, 'ಸಿ' & 'ಡಿ' ಲ್ಯಾಂಡ್, ರೈತರ ಜಮೀನು ಮತ್ತು ಸರ್ಕಾರಿ

ನಂ. 448, 4ನೇ ಮಹಡಿ, ಗೇಟ್ ನಂ.2, ಬಹುಮಹಡಿ ಕಟ್ಟಡ, ಡಾ॥ ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು-560 001
ದೂರವಾಣಿ: 080-2225 6722 / 2203 2509, ಫ್ಯಾಕ್ಸ್: 080-2225 8393, ಮಿಂಚಂಚೆ: prs-fee@karnataka.gov.in / prsfee@gmail.com
No. 448, 4th floor, Gate No.2, M.S. Building, Dr. B.R.Ambedkar Veedhi, Bengaluru – 560 001
Tel: 2225 6722 / 2203 2509, Fax: 080-2225 8393, Email: prs-fee@karnataka.gov.in / prsfee@gmail.com

ಜಮೀನಿನಲ್ಲಿ ಬೀಜದ ಉಂಡೆ / ಬೀಜ ಬಿತ್ತನೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು. ಈ ಕಾರ್ಯಕ್ರಮದ ಅನುಷ್ಠಾನವು ಹಾಗೂ ಸಸಿಗಳ ಬದುಕುಳಿಕೆಯು ಇಲಾಖೆಯ ಸಂಬಂಧಪಟ್ಟ ಅಧಿಕಾರಿಯ ಜವಾಬ್ದಾರಿಯಾಗಿರುತ್ತದೆ.

6. ಈ ಕಾರ್ಯಕ್ರಮದಡಿ ಆಯ್ದ ಗ್ರಾಮಗಳಲ್ಲಿನ ತಾಲ್ಲೂಕು ಹಾಗೂ ಜಿಲ್ಲೆಯ ಕೇಂದ್ರಗಳಲ್ಲಿ ಪ್ರತಿ ಕುಟುಂಬಕ್ಕೆ ಅವರ ಅವಶ್ಯಕತೆಗೆ ತಕ್ಕಂತೆ ಸಸಿಗಳನ್ನು ಮನೆಯ ಅಂಗಳದಲ್ಲಿ ಹಂತ-ಹಂತವಾಗಿ ನೆಡಲು ಕ್ರಮ ಕೈಗೊಳ್ಳುವುದು. ಈ ಕಾರ್ಯಕ್ರಮದಲ್ಲಿ ಸಸಿಗಳನ್ನು ನೆಟ್ಟ ಪ್ರತಿಯೊಂದು ಸ್ಥಳಗಳ ಜಿಯೋ ಟ್ಯಾಗಿಂಗ್ ಮಾಡುವುದು ಹಾಗೂ ಸಸಿಗಳ ಉಳಿಯುವಿಕೆಯ ಬಗ್ಗೆ ಉಸ್ತುವಾರಿ ಮಾಡುವುದು.

7. ಮೇಲ್ಕಂಡಂತೆ ವಿವರಿಸಿದ ಕಾಮಗಾರಿಗಳ ಜೊತೆ ಪ್ರಚಾರ ಮಾಧ್ಯಮಗಳಾದ ದಿನಪತ್ರಿಕೆಗಳಲ್ಲಿ ಜಾಹೀರಾತು, ಬೀದಿನಾಟಕ, ಭಿತ್ತಿ ಪತ್ರ, ಕರಪತ್ರ ಮುದ್ರಿಸುವುದು ಹಾಗೂ ಇನ್ನಿತರೆ ಪರಿಸರದ ಬಗ್ಗೆ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಈ ಕಾರ್ಯಕ್ರಮಗಳ ಅನುಷ್ಠಾನ ಹಾಗೂ ಉಪಯುಕ್ತತೆಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಕ್ಕೆ ಹಾಗೂ ವನಮಹೋತ್ಸವ ಕಾರ್ಯಕ್ರಮ ಆಯೋಜಿಸಲಾಗುವುದು. ಈ ಕಾರ್ಯಕ್ರಮದ ವೆಚ್ಚವನ್ನು ಅರಣ್ಯ ಇಲಾಖೆಯಿಂದ ಭರಿಸಲಾಗುವುದು.

ಈ ಕಾರ್ಯಕ್ರಮದ ಅನುಷ್ಠಾನದ ಪ್ರಗತಿ ಪರಿಶೀಲನೆಯನ್ನು ಚಾಚು ತಪ್ಪದೇ ನಡೆಸುವುದು ಮತ್ತು ಅನುಷ್ಠಾನ ವರದಿಯನ್ನು ಛಾಯಾಚಿತ್ರಗಳೊಂದಿಗೆ ಅವಶ್ಯವಾಗಿ ಸಲ್ಲಿಸುವುದು.

ಆದರಗಳೊಂದಿಗೆ,

ತಮ್ಮ ವಿಶ್ವಾಸಿ,
ಸಹಿ/-
(ಸಂದೀಪ್ ದವೆ)

ಗೆ:

ಎಲ್ಲಾ ಜಿಲ್ಲಾಧಿಕಾರಿಗಳು/ಎಲ್ಲಾ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು/ಸಂಬಂಧಪಟ್ಟ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು

ಪ್ರತಿಗಳು:

1. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, ಬೆಂಗಳೂರು.
2. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅರಣ್ಯ ಭವನ, ಬೆಂಗಳೂರು
3. ಎಲ್ಲಾ ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಗೆ
4. ಎಲ್ಲಾ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಗೆ
5. ಎಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು, ಪ್ರಾದೇಶಿಕ / ಸಾಮಾಜಿಕ ವಿಭಾಗ.

(ಸಂದೀಪ್ ದವೆ)

ಸಂಖ್ಯೆ: ಇಡಿ 56 ಪ್ರಕಾ 2018

ಕರ್ನಾಟಕ ಸರ್ಕಾರ ಸಚಿವಾಲಯ
ಉನ್ನತ ಶಿಕ್ಷಣ ಇಲಾಖೆ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 10/08/2018

**ಇಂದ:**
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಉನ್ನತ ಶಿಕ್ಷಣ ಇಲಾಖೆ.
ಬಹುಮಹಡಿಗಳ ಕಟ್ಟಡ.
ಬೆಂಗಳೂರು.

**ಇವರಿಗೆ:**
1. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಪ್ರೊ.ಟಿ.ಕೆ.ಉಮೇಶ್, ಕುಲಪತಿಗಳು, ಮೈಸೂರು ವಿಶ್ವವಿದ್ಯಾಲಯ, ಮೈಸೂರು.
4. ಡಾ.ಕೆ.ಆರ್.ವೇಣುಗೋಪಾಲ್, ಕುಲಪತಿಗಳು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು.
5. ಪ್ರೊ.ಪ್ರಮೋದ್ ಗಾಯಿ, ಕುಲಪತಿಗಳು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
6. ಡಾ.ಎಸ್.ಆರ್.ನಿರಂಜನ್, ಕುಲಪತಿಗಳು, ಗುಲ್ಬರ್ಗಾ ವಿಶ್ವವಿದ್ಯಾಲಯ, ಗುಲ್ಬರ್ಗಾ.
7. ಪ್ರೊ.ಕಿಶೋರ್ ಕುಮಾರ್ ಪಿ.ಕೆ., ಕುಲಪತಿಗಳು, ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು.
8. ಪ್ರೊ.ಜೋಗನ್ ಶಂಕರ್, ಕುಲಪತಿಗಳು, ಕುವೆಂಪು ವಿಶ್ವವಿದ್ಯಾಲಯ, ಶಿವಮೊಗ್ಗ.
9. ಪ್ರೊ.ಮಲ್ಲಿಕಾ ಎಸ್.ಘಂಟಿ, ಕುಲಪತಿಗಳು, ಕನ್ನಡ ವಿಶ್ವವಿದ್ಯಾಲಯ, ಹಂಪಿ.
10. ಪ್ರೊ.ಡಿ.ಶಿವಲಿಂಗಯ್ಯ, ಕುಲಪತಿಗಳು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು.
11. ಪ್ರೊ.ಸಬೀಹ, ಕುಲಪತಿಗಳು, ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ.
12. ಪ್ರೊ.ಸಿದ್ದೇಗೌಡ ವೈ.ಎಸ್., ಕುಲಪತಿಗಳು, ತುಮಕೂರು ವಿಶ್ವವಿದ್ಯಾಲಯ, ತುಮಕೂರು.
13. ಪ್ರೊ.ಎಸ್.ವಿ.ಹಲ್ಸೆ, ಕುಲಪತಿಗಳು, ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ.
14. ಡಾ.ಎಸ್.ಬಿ.ಹೊಸ್‌ಮನಿ, ಕುಲಪತಿಗಳು, ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
15. ಡಾ.ಎಂ.ಎಸ್.ಸುಭಾಷ್, ಕುಲಪತಿಗಳು, ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ.
16. ಪ್ರೊ. ರಾಜೇಶ್, ಕುಲಪತಿಗಳು, ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು.
17. ಪ್ರೊ.ಪದ್ಮ ಶೇಖರ್, ಕುಲಪತಿಗಳು, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು.
18. ಡಾ.ಕರಿಸಿದ್ದಪ್ಪ, ಕುಲಪತಿಗಳು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾಂ.
19. ಪ್ರೊ.ಡಿ.ಬಿ.ನಾಯಕ್, ಕುಲಪತಿಗಳು, ಜಾನಪದ ವಿಶ್ವವಿದ್ಯಾಲಯ, ಹಾವೇರಿ.
20. ಪ್ರೊ.ಎಸ್.ಜಾಫೆಟ್, ಕುಲಪತಿಗಳು, ಬೆಂಗಳರೂ ಕೇಂದ್ರ ವಿಶ್ವವಿದ್ಯಾಲಯ, ಬೆಂಗಳೂರು.
21. ಪ್ರೊ.ಟಿ.ಡಿ.ಕೆಂಪರಾಜು, ಕುಲಪತಿಗಳು, ಬೆಂಗಳರೂ ಉತ್ತರ ವಿಶ್ವವಿದ್ಯಾಲಯ, ಕೋಲಾರ.

ಮಾನ್ಯರೇ,

**ವಿಷಯ:** 2018-19ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿದಂತೆ "ಹಸಿರು ಕರ್ನಾಟಕ" ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬೆಂಗಳೂರು ರವರ ಅರೆ ಸರ್ಕಾರಿ ಪತ್ರ ಸಂಖ್ಯೆ: ಅಪಜೀ 108 ಎಫ್‌ಎಪಿ 2018, ದಿನಾಂಕ 02-08-2018.

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2018-19ನೇ ಸಾಲಿನ ಜುಲೈ-2018ರ ಆಯವ್ಯಯ ಭಾಷಣದ ಕಂಡಿಕೆ 138ರಲ್ಲಿ "ಹಸಿರು ಕರ್ನಾಟಕ" ಯೋಜನೆಯನ್ನು ಅನುಷ್ಠಾನಗೊಳಿಸಲು

ಪು.ತಿ.ನೋ...

ಘೋಷಿಸಲಾಗಿದೆ. ಈ ಹಿನ್ನಲೆಯಲ್ಲಿ ಈ ಕಾರ್ಯಕ್ರಮವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವ ಸಲುವಾಗಿ 15ನೇ ಆಗಸ್ಟ್ 2018ರಂದು ರಾಜ್ಯಾದ್ಯಂತ ಎಲ್ಲಾ ಜಿಲ್ಲೆಗಳಲ್ಲಿ ಚಾಲನೆ ನೀಡಲಾಗುತ್ತಿದ್ದು, ಈ ಸಂಬಂಧ ವ್ಯಾಪಕವಾಗಿ ಪ್ರಚಾರ ಕಾರ್ಯವನ್ನು ಪ್ರಾರಂಭಿಸಿ 18ನೇ ಆಗಸ್ಟ್‌ವರೆಗೆ ಆಯೋಜನೆ ಮಾಡಲು ಯೋಜಿಸಲಾಗಿದೆ..

ಈ ಸಂಬಂಧ ಈಗಾಗಲೇ ಉಲ್ಲೇಖಿತ ಆರೆ ಸರ್ಕಾರಿ ಪತ್ರದಲ್ಲಿ ಈ ಕಾರ್ಯಕ್ರಮದ ಯಶಸ್ವಿ ಅನುಷ್ಠಾನಕ್ಕಾಗಿ ಹಮ್ಮಿಕೊಳ್ಳಬೇಕಾದ ಕಾರ್ಯಕ್ರಮಗಳ ಬಗ್ಗೆ ಎಲ್ಲಾ ಜಿಲ್ಲಾಧಿಕಾರಿ ಹಾಗೂ ಮುಖ್ಯ ಕಾರ್ಯನಿರ್ವಹಕಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. (ಪ್ರತಿ ಲಗತ್ತಿಸಿದೆ) ಅಲ್ಲದೆ, ಈ ಸಂಬಂಧ ಜಿಲ್ಲಾ ಮಟ್ಟದಲ್ಲಿ ಸಮಿತಿ ರಚಿಸಿದ್ದು, ಈ ಸಮಿತಿಯಲ್ಲಿ ಈ ಇಲಾಖೆಯ ಅಧಿಕಾರಿಗಳೂ ಸಹ ಸದಸ್ಯರಾಗಿರುತ್ತಾರೆ. ಆದ್ದರಿಂದ ಉನ್ನತ ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಬರುವ ಕಾಲೇಜುಗಳು, ವಿಶ್ವವಿದ್ಯಾಲಯಗಳು ಮತ್ತು ಇತರೆ ಉನ್ನತ ಶಿಕ್ಷಣ ಇಲಾಖೆಯ ಅಧಿಕಾರಿಗಳು / ಸಿಬ್ಬಂದಿ / ಕಾಲೇಜು ವಿದ್ಯಾರ್ಥಿಗಳು, ಮೇಲೆ ಪ್ರಸ್ತಾಪಿಸಿದ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳಿಗೆ ಹಾಗೂ ಅರಣ್ಯ ಅಧಿಕಾರಿಗಳಿಗೆ ಪೂರ್ಣ ಸಹಕಾರ ನೀಡುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸೂಚಿಸಿದೆ.

ವಂದನೆಗಳೊಂದಿಗೆ.

ತಮ್ಮ ವಿಶ್ವಾಸಿ,

(ಡಾ: ರಾಜ್‌ಕುಮಾರ್ ಖತ್ರಿ)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ

**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ 33 ಬಿಎಲ್‌ಡಿ 2015
ಅಡಕ: ಸರ್ಕಾರದ ಪತ್ರಗಳು

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:18-08-2018.

ಹಿಂಬರಹ

**ಸರ್ಕಾರದ ಪತ್ರ ಸಂಖ್ಯೆ:ಇಡಿ 56 ಪ್ರಕಾ 2018 ದಿನಾಂಕ:10-08-2018 ಅನ್ನು ತಮ್ಮಗಳ ಗಮನಕ್ಕೆ ತರುತ್ತಾ ಅಗತ್ಯ ಕ್ರಮಕೈಗೊಳ್ಳಲು ತಿಳಸಲಾಗಿದೆ.**

C.D. Ramalingam
ತಾಂತ್ರಿಕ ಸಹಾಯಕರು[ಕಟ್ಟಡ]

**ಕರಡು ನಿರ್ದೇಶಕರಿಂದ ಅನುಮೋದಿಸಿದೆ.**

ಇವರಿಗೆ:

1. ಪ್ರಿನ್ಸಿಪಾಲರು,
ಎಲ್ಲಾ ಇಂಜಿನಿಯರಿಂಗ್ ಕಾಲೇಜುಗಳು, ಪಾಲಿಟೆಕ್ನಿಕ್‌ಗಳು ಮತ್ತು ಕಿರಿಯ ತಾಂತ್ರಿಕ ಶಾಲೆಗಳು.

2. ಇ. ಕಡತ ವಿಭಾಗಕ್ಕೆ.